# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1002 (1039) |
| ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಶಿವಕುಮಾರ್ ಕೆ.<br>(ನಾಮ ನಿರ್ದೇಶಿತರು) |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ<br>ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 16.12.2025 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ರಿಲಾಯನ್ಸ್, ಟಾಟಾ, ಬಿರ್ಲಾ, ಟೆಸ್ಲಾ, ಇಂತಹ ಕಂಪನಿಗಳಿಂದ ಬೃಹತ್ ಕೈಗಾರಿಕೆಗಳು ಹಾಗೂ ವಾಣಿಜ್ಯೋದ್ಯಮಗಳನ್ನು ಆರಂಭಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ, ವಿಜಯಪುರದಂತಹ ಜಿಲ್ಲೆಗಳಲ್ಲಿ ಬೆಂಗಳೂರಿಗೆ ಸಮವಾಗಬಹುದಾದ ಕೈಗಾರಿಕಾ ಬೆಳವಣಿಗೆಯನ್ನು ಮುಂದಿನ ಎಷ್ಟು ವರ್ಷಗಳಲ್ಲಿ ಸರ್ಕಾರದ ಯಾವ ವಿಶೇಷ ಯೋಜನೆಗಳ ಮೂಲಕ ಸಾಧಿಸಲಾಗುತ್ತದೆ; | ಉತ್ತರ ಕರ್ನಾಟಕ ಭಾಗದಲ್ಲಿ ಲಭ್ಯವಿರುವ ಸಂಪನ್ಮೂಲಗಳು ಹಾಗೂ ಭೂಮಿ, ಕೈಗಾರಿಕಾ ನೀತಿ 2025-30 ಅಡಿ ಲಭ್ಯವಿರುವ ಸೌಲಭ್ಯ / ಉತ್ತೇಜನ / ಪ್ರೋತ್ಸಾಹಗಳ / ರಿಯಾಯಿತಿಗಳ ಮಾಹಿತಿಯನ್ನು ದೇಶದ ಹಾಗೂ ವಿದೇಶದ ಕಂಪನಿಗಳಿಗೆ ಮನವರಿಕೆ ಮಾಡಿಕೊಡಲಾಗುತ್ತಿದೆ. ಕೈಗಾರಿಕೆ ಸ್ಥಾಪಿಸಲು ಕಂಪನಿಗಳು ಮುಂದೆ ಬಂದಲ್ಲಿ ಅಗತ್ಯವಿರುವ ಎಲ್ಲಾ ಮೂಲಭೂತ ಸೌಕರ್ಯ ಹಾಗೂ ಉತ್ತೇಜನ ಮತ್ತು ರಿಯಾಯಿತಿಗಳನ್ನು ನೀಡಿ, ಕೈಗಾರಿಕೆ ಸ್ಥಾಪಿಸಲು ಉತ್ತೇಜನ ನೀಡಲಾಗುತ್ತದೆ.<br>ಅರ್ಹ ಬೃಹತ್ ಕೈಗಾರಿಕೆಗಳ ಬೇಡಿಕೆ ಆಧಾರದಲ್ಲಿ ವಿಶೇಷ ಉತ್ತೇಜನ ಮತ್ತು ರಿಯಾಯಿತಿಗಳನ್ನು ನೀಡಲು ಸಹ ಸರ್ಕಾರ ಬದ್ಧವಾಗಿದ್ದು, ಹೆಚ್ಚಿನ ಕೈಗಾರಿಕೆಗಳನ್ನು ಉತ್ತರ ಕರ್ನಾಟಕದಲ್ಲಿ ಸ್ಥಾಪಿಸಲು ಅಗತ್ಯ ಕ್ರಮ ಕೈಗೊಳ್ಳುತ್ತದೆ. |
| ಆ | ಉತ್ತರ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಕೈಗಾರಿಕಾ ಹಾಗೂ ವಾಣಿಜ್ಯೋದ್ಯಮ ಬೆಳವಣಿಗೆ ಆಗದಿರಲು ಕಾರಣಗಳೇನು, ಸರ್ಕಾರ ಮುಂಬರುವ ದಿನಗಳಲ್ಲಿ ಪ್ರತಿ ಜಿಲ್ಲೆಯಲ್ಲಿ ಕೈಗೊಳ್ಳಬಯಸುವ ಕ್ರಮಗಳೇನು; | ಉತ್ತರ ಕರ್ನಾಟಕ ಭಾಗದಲ್ಲಿ ಕಚ್ಚಾ ವಸ್ತು ಆಧಾರಿತ ಬೃಹತ್ ಕೈಗಾರಿಕೆಗಳು ಈಗಾಗಲೇ ಸ್ಥಾಪನೆಯಾಗಿರುತ್ತದೆ.<br>ಉನ್ನತ ತಾಂತ್ರಿಕ ಆಧಾರಿತ ಕೈಗಾರಿಕೆಗಳನ್ನು ಸ್ಥಾಪಿಸಲು ಅಗತ್ಯ ಮಾನವ ಸಂಪನ್ಮೂಲಗಳು ಬೆಂಗಳೂರು ಹಾಗೂ ಮೈಸೂರು ಭಾಗದಲ್ಲಿ ಇರುವುದರಿಂದ ಈ ಸ್ಥಳಗಳಲ್ಲಿ ಉನ್ನತ ತಾಂತ್ರಿಕ ಕೈಗಾರಿಕೆಗಳು ಸ್ಥಾಪಿತಗೊಂಡಿವೆ. ಮುಂಬರುವ ದಿನಗಳಲ್ಲಿ, ಉತ್ತರ ಕರ್ನಾಟಕ ಹಾಗೂ ಇತರೆ ಜಿಲ್ಲೆಗಳಲ್ಲಿ ತಾಂತ್ರಿಕ ಆಧಾರಿತ ಕೈಗಾರಿಕೆಗಳನ್ನು ಸ್ಥಾಪಿಸಲು ಪ್ರೋತ್ಸಾಹಿಸಲಾಗುತ್ತದೆ. |
| ಇ | ಉತ್ತರ ಕರ್ನಾಟಕದ ಕೈಗಾರಿಕಾಭಿವೃದ್ಧಿಗೆ ಕೇಂದ್ರ ಸರ್ಕಾರದ ಹಾಗೂ ರಾಜ್ಯ ಸರ್ಕಾರದ ನೀತಿಗಳು ಯಾವುವು? | ಕೈಗಾರಿಕಾ ನೀತಿ 2025-30 ರಡಿ ಉತ್ತರ ಕರ್ನಾಟಕದ ತಾಲ್ಲೂಕುಗಳನ್ನು ವಲಯ-1 ರಡಿ ವರ್ಗೀಕರಿಸಲಾಗಿದ್ದು, ಇಲ್ಲಿ ಸ್ಥಾಪಿಸಲಾಗುವ ಕೈಗಾರಿಕೆಗಳಿಗೆ ಹೆಚ್ಚಿನ ರಿಯಾಯಿತಿ ಹಾಗೂ ಪ್ರೋತ್ಸಾಹಗಳನ್ನು ನೀಡಲಾಗುತ್ತಿದೆ. |

**ಸಿಐ 370 ಎಸ್‌ಪಿಐ 2025**

(**ಎಂ.ಬಿ. ಪಾಟೀಲ**)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು